# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(2)ಪಿಆರ್/265/2016–17 2018–19

ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 13/8/18

## ಸುತ್ತೋಲೆ

ವಿಷಯ: 2018ನೇ ಸಾಲಿನ ನಾಡಪ್ರಭು ಕೆಂಪೇಗೌಡ ದಿನಾಚರಣೆ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ 2018ನೇ ಸಾಲಿನಲ್ಲಿ ನಾಡಪ್ರಭು ಕೆಂಪೇಗೌಡ ದಿನಾಚರಣೆಯನ್ನು ದಿನಾಂಕ: 16–08–2018 ರಂದು ಡಾ|| ರಾಜ್‌ಕುಮಾರ್ ಗಾಜಿನ ಮನೆ, ನಗರ ಪಾಲಿಕೆ ಕೇಂದ್ರ ಕಛೇರಿ ಆವರಣ, ಬೆಂಗಳೂರು, ಇಲ್ಲಿ ಆಚರಿಸುತ್ತಿದ್ದು, ಸದರಿ ಕಾರ್ಯಕ್ರಮಕ್ಕೆ ಕೇಂದ್ರ ಕಛೇರಿ ಮತ್ತು 8 ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ / ನೌಕರರುಗಳು ಕಡ್ಡಾಯವಾಗಿ ಬೆಳಿಗ್ಗೆ 11.00 ಗಂಟೆಯಿಂದ ಕಾರ್ಯಕ್ರಮ ಮುಕ್ತಾಯವಾಗುವವರೆವಿಗೂ ಭಾಗವಹಿಸಲು ಹಾಗೂ ಒಂದು ವೇಳೆ ನಾಡಪ್ರಭು ಕೆಂಪೇಗೌಡ ದಿನಾಚರಣೆ ಕಾರ್ಯಕ್ರಮಕ್ಕೆ ಗೈರು ಹಾಜರಾದಲ್ಲಿ ಅಂತಹ ಅಧಿಕಾರಿ / ನೌಕರರುಗಳ ವೇತನವನ್ನು {ದಿನಾಂಕ: 16–08–2018 ರಂದು ಒಂದು ದಿನ} ಕಡ್ಡಾಯವಾಗಿ ಕಟಾವುಗೊಳಿಸಲಾಗುವುದೆಂದು ಸೂಚಿಸಲು ಮಾನ್ಯ ಆಯುಕ್ತರವರಿಂದ ನಿರ್ದೇಶಿಸಲ್ಪಟ್ಟಿರುತ್ತೇನೆ.

ಮುಂದುವರೆದು, ಎಲ್ಲಾ ವಲಯಗಳ ಅಪರ / ಜಂಟಿ ಆಯುಕ್ತರುಗಳು ತಮ್ಮ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ / ನೌಕರರುಗಳಿಗೆ ನಾಡಪ್ರಭು ಕೆಂಪೇಗೌಡ ದಿನಾಚರಣೆಯಲ್ಲಿ ಭಾಗವಹಿಸುವ / ಭಾಗವಹಿಸಿರುವ ಬಗ್ಗೆ ಹಾಜರಾತಿಯನ್ನು ಪಡೆದು, ಆಡಳಿತ ಶಾಖೆಗೆ ವರದಿ ಸಲ್ಲಿಸಲು ಸೂಚಿಸಲು ಮಾನ್ಯ ಆಯುಕ್ತರವರಿಂದ ನಿರ್ದೇಶಿಸಲ್ಪಟ್ಟಿರುತ್ತೇನೆ.

ಸಹಾಯಕ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

13/8/18 13/8/18

ಪ್ರತಿಯನ್ನು: ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.

- : ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
- : ಆಯುಕ್ತರು/ವಿಶೇಷ ಆಯುಕ್ತರು (ಯೋಜನೆ/ಹಣಕಾಸು) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
- : ಅಪರ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
- : ಕೌನ್ಸಿಲ್ ಕಾರ್ಯದರ್ಶಿರವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಯ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರು, ವಿರೋಧ ಪಕ್ಷದ ನಾಯಕರುಗಳಿಗೆ ಕಳುಹಿಸಿಕೊಡಲು ಕೋರಿದೆ.
- : ಎಲ್ಲಾ ಅಪರ / ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
- : ಎಲ್ಲಾ ಇಲಾಖಾ ಮುಖ್ಯಸ್ಥರು / ಬಟವಾಡೆ ಅಧಿಕಾರಿಗಳಿಗೆ ಕಳುಹಿಸಿದೆ.
- : ಸಾರ್ವಜನಿಕ ಸಂಪರ್ಕಾಧಿಕಾರಿ ರವರಿಗೆ ಮಾಹಿತಿಗೆ ಹಾಗೂ ಅಗತ್ಯಕ್ರಮಕ್ಕಾಗಿ ಕಳುಹಿಸಿದೆ.
- : ಮಾಹಿತಿ ಮತ್ತು ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
- : ಕಛೇರಿ ಪ್ರತಿ.